ಬೈಲಹೊಂಗಲ ನಗರದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ ಕಟ್ಟಡ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1135(1095)

ಸದಸ್ಯರ ಹೆಸರು: ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ)

ಉತ್ತರಿಸುವ ಸಚಿವರು: ಡಾ॥ ಜಿ.ಪರಮೇಶ್ವರ(ಉನ್ನತ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು)

ಪ್ರಶ್ನೆ

ಅ. ಬೆಳಗಾಂ ಜಿಲ್ಲೆ ಬೈಲಹೊಂಗಲ ನಗರದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಇನ್ನೂ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆಯ ಕಟ್ಟಡದಲ್ಲಿ ನಡೆಯುತ್ತಿರುವ ಸಂಗತಿ ನಿಜವೇ?

ಆ. ಈ ಕಾಲೇಜಿಗೆ ಪ್ರಾಚಾರ್ಯರ ಕೊಠಡಿ ಶಿಕ್ಷಕ ಶಿಕ್ಷಕಿಯರ ಕೊಠಡಿ ಹಾಗೂ ಸಾಕಷ್ಟು ಸ್ಥಳಾವಕಾಶ ಇಲ್ಲದೆ ಇರುವ ಸಂಗತಿ ನಿಜವೇ?

ಇ. ಹಾಗಿದ್ದಲ್ಲಿ, ಕೂಡಲೇ ಇಲ್ಲಿ ಸ್ವತಂತ್ರವಾದ ಕಟ್ಟಡವನ್ನು ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

ಈ. ನಬಾರ್ಡ್ ಯೋಜನೆಯಡಿಯಲ್ಲಿ ಈ ಮಹಾ ವಿದ್ಯಾಲಯದ ಕಟ್ಟಡ ಕಟ್ಟುವ ಕೆಲಸವನ್ನು ಸೇರಿಸಿ ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

ಉತ್ತರ

ಅ. ಹೌದು.

ಆ. ಹೌದು.

ಇ. ಸದರಿ ಕಾಲೇಜಿಗೆ ನಿವೇಶನ ಪಡೆಯಲು ಪ್ರಯತ್ನಿಸಲಾಗುತ್ತಿದೆ. ನಿವೇಶನ ದೊರೆತ ನಂತರ ಸ್ವಂತ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಈ. ಉದ್ಭವಿಸುವುದಿಲ್ಲ.

ಬೈಲಹೊಂಗಲ ತಾಲ್ಲೂಕಿನ ಬೆಳವಡಿಯಲ್ಲಿ ಸರ್ಕಾರಿ ಡಿಪ್ಲೋಮಾ ಕಾಲೇಜು

ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1136(1099)

ಸದಸ್ಯರ ಹೆಸರು: ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ)

ಉತ್ತರಿಸುವ ಸಚಿವರು: ಡಾ॥ ಜಿ.ಪರಮೇಶ್ವರ್(ಉನ್ನತ ಶಿಕ್ಷಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು)

ಪ್ರಶ್ನೆ

1. ಶೂರ ಶಿವಾಜಿಯ ಜೊತೆಗೆ ಹೋರಾಡಿದ ವೀರರಾಣಿ ಬೆಳವಡಿ ಮಲ್ಲಮ್ಮನ ಊರಾದ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಬೆಳವಡಿ ಗ್ರಾಮದಲ್ಲಿ 50ನೇ ವರ್ಷದ ಸ್ವಾತಂತ್ರೋತ್ಸವದ ಸವಿ ನೆನಪಿಗಾಗಿ ಸರ್ಕಾರಿ ಡಿಪ್ಲೋಮಾ ಕಾಲೇಜು ಪ್ರಾರಂಭಿಸಲು ರಾಜ್ಯ ತಾಂತ್ರಿಕ ಶಿಕ್ಷಣ ಇಲಾಖೆಯವರು ದಿಲ್ಲಿಯ ಎ.ಐ.ಸಿ.ಟಿ.ಇ. ಗೆ ಒಪ್ಪಿಗೆ ಪಡೆಯಲು ಪತ್ರ ಬರೆದಿರುವುದು ನಿಜವೇ? ಹಾಗಿದ್ದಲ್ಲಿ ಪತ್ರ ದಿನಾಂಕವನ್ನು ತಿಳಿಸುವುದು.

2. ಈಗ ಅದು ಯಾವ ಹಂತದಲ್ಲಿದೆ?

3. ಹಿಂದಿನ ಮುಖ್ಯ ಮಂತ್ರಿಗಳು ಬೆಳವಡಿಗೆ ಬಂದಾಗ ಸರ್ಕಾರಿ ಡಿಪ್ಲೋಮಾ ಕಾಲೇಜು ಪ್ರಾರಂಭಿಸುವುದಾಗಿ ಆಶ್ವಾಸನೆ ನೀಡಿದ್ದರಿಂದ ರಾಜ್ಯ ಸರ್ಕಾರದವರು ದಿಲ್ಲಿಯ ಎ.ಐ.ಸಿ.ಟಿ.ಇ.ಗೆ ಒಪ್ಪಿಗೆಗಾಗಿ ಪ್ರಸ್ತಾವನೆಯನ್ನು ಕಳುಹಿಸಲಾಗಿದ್ದಿತ್ತು. ಆದಕಾರಣ ಕೂಡಲೇ ಇಲ್ಲಿ ಸರ್ಕಾರಿ ಡಿಪ್ಲೋಮಾ ಕಾಲೇಜು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಉತ್ತರ

1. ಹೌದು, ತಾಂತ್ರಿಕ ನಿರ್ದೇಶನಾಲಯದ ಪತ್ರ ಸಂಖ್ಯೆ: ಡಿಟಿಇ 36 ಡಿವಿಪಿ (1) 2000 ದಿನಾಂಕ: 08-08-2000

2. ಪ್ರಸ್ತಾವನೆಯು ಎ.ಐ.ಸಿ.ಟಿ.ಇ. ನವದೆಹಲಿಯವರ ಪರಿಶೀಲನೆಯ ಹಂತದಲ್ಲಿರುತ್ತದೆ.

3. ಎ.ಐ.ಸಿ.ಟಿ.ಇ. ನವದೆಹಲಿಯವರಿಂದ ಅನುಮೋದನೆ ಬಂದ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು.